**ಮೊದಲನೇ ಅಪರ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಕನಕಪುರ.**
CC No. 614/2016

CW -4 PW - 1

| | | |
|---|---|---|
| ಹೆಸರು | ಃ | ಹಿದಾಯತ್ |
| ತಂದೆಯ ಹೆಸರು | ಃ | ಮಹಮ್ಮದ್ ಖಾನ್ |
| ವಯಸ್ಸು | ಃ | 45 ವರ್ಷ |
| ಉದ್ಯೋಗ | ಃ | ಆಟೋ ಚಾಲಕ |
| ವಾಸ | ಃ | ಬೆಂಗಳೂರು |

ಸಾಕ್ಷಿಯನ್ನು ಕರೆಸಲಾಯಿತು. ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ ಃ ಮಾನ್ಯ ಎಪಿಪಿ ಯವರಿಂದ ಃ ದಿನಾಂಕ 20.10.2022

ಆರೋಪಿ ನನಗೆ ಗೊತ್ತು. ಈ ದಿನ ನ್ಯಾಯಾಲಯಕ್ಕೆ ಆರೋಪಿ ಗೈರು ಹಾಜರಿದ್ದುಅವರ ಗುರುತಿಸುವಿಕೆಗೆ ಯಾವುದೇ ತಕರಾರು ಇರುವುದಿಲ್ಲ ಎಂದು ನುಡಿದಿರುತ್ತಾರೆ. ಮೃತ ವಾಸಿಂ ಅಕ್ರಂ ನನ್ನ ಅಕ್ಕನ ಮಗ.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ, ಅದರಲ್ಲಿನ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಸದರಿ ದಾಖಲೆ ಮಹಜರ್ ಆಗಿದ್ದು ಅದನ್ನು ನಿಪಿ-1 ಎಂದು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ನಿಪಿ-1 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ಮಹಜರ್ ಕ್ರಮ ಜರುಗಿಲ್ಲ ಮತ್ತು ಯಾವುದೇ ವಾಹನವನ್ನು ಅಮಾನತು ಪಡಿಸಿಕೊಂಡಿಲ್ಲ.

**(ಈ ಹಂತದಲ್ಲಿ ಮಾನ್ಯ ಸರ್ಕಾರಿ ಅಭಿಯಾೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲುಗೆ ಅನುಮತಿ ಕೋರಿರುತ್ತಾರೆ. ಅನುಮತಿಸಲಾಯಿತು)**

ದಿಃ 22.07.2015 ರಂದು ಸಾತನೂರು ಪೋಲೀಸರು ನಮ್ಮಗಳನ್ನು ಪ್ರಕರಣದ ಸಾರಾಂಶವನ್ನು ತಿಳಿಸಿ ಕೃತ್ಯ ಸ್ಥಳದ ಪಂಚನಾಮೆಗಾಗಿ ಬರಮಾಡಿಕೊಂಡಿದ್ದರು ಎಂದರೆ ಸರಿಯಲ್ಲ. ನಮ್ಮ ಸಮಕ್ಷಮ ಕೃತ್ಯ ಸ್ಥಳದ ಪಂಚನಾಮೆ ಮಾಡಿ ಕೃತ್ಯ ಸ್ಥಳದಿಂದ ಮಹೇಂದ್ರ ಕಂಪನಿಯ ಜೀಪ್ ನಂ.ಕೆಎ-20 ಎಂ-153 ಹಾಗೂ ಹೊಂಡಾ ಕಂಪನಿಯ ಆಕ್ಟೀವ ಮಾದರಿಯ ಕೆಎ-05-ಜೆಜಿ-5316 ವಾಹನಗಳನ್ನು ಅಮಾನತು ಪಡಿಸಿಕೊಂಡು ಸ್ಥಳದಲ್ಲೇ ಸಹಿ ಪಡೆದರು

ಎಂದರೆ ಸರಿಯಲ್ಲ. ಆರೋಪಿಯೊಂದಿಗೆ ರಾಜೀ ಮಾಡಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು : ಆರೋಪಿ ಪರ ಶ್ರೀ. ವಕೀಲರಿಂದ:</u>**

ಏನು ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)

ಓ ಹೇ ಕೇ ಸ ಒ

ಮೊದಲನೇ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಕನಕಪುರ